ಪ್ರ-72 (80)

# ಕರ್ನಾಟಕ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72 ರಡಿಯಲ್ಲಿ ಗಮನ ಸೆಳೆಯುವ ಸೂಚನೆ

## ವಿಷಯ

ಕಾಲೇಜು ಶಿಕ್ಷಣ ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಕಾಲೇಜುಗಳಲ್ಲಿ ಯು.ಜಿ.ಸಿ./ಎ.ಐ.ಸಿ.ಟಿ.ಇ. ನಿಯಮವಳಿಗಳ ಪ್ರಕಾರ ಬೋಧಕ ಸಿಬ್ಬಂದಿಯ ಕೊರತೆ ಇದ್ದರೂ ಸಹ ಬೋಧಕ ಸಿಬ್ಬಂದಿಯನ್ನು ಬೋಧಕೇತರ ಇಲಾಖೆಗಳಿಗೆ ಅನ್ಯಕಾರ್ಯನಿಮಿತ್ತ ನಿಯೋಜನೆ ಮೇರೆಗೆ ಕಳುಹಿಸಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಉನ್ನತ ಶಿಕ್ಷಣ, ಐ.ಟಿ. ಅಂಡ್ ಬಿ.ಟಿ. ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ ಸಚಿವರ ಪ್ರಸ್ತಾಪಿಸಬಯಸುತ್ತೇನೆ.

## ಉತ್ತರ

<u>ಕಾಲೇಜು ಶಿಕ್ಷಣ:-</u>ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 262 ಡಿಸಿಇ 2012, ದಿನಾಂಕ:11.07.2012ರಲ್ಲಿ ಶೈಕ್ಷಣಿಕ ನಿರ್ವಹಣೆ ಮತ್ತು ಸಂಶೋಧನೆಗಳಲ್ಲದ ಹುದ್ದೆಗಳಿಗೆ ನಿಯೋಜಿಸುವುದನ್ನು ನಿಯಂತ್ರಿಸಲು ನೀಡಿರುವ ಸೂಚನೆಗಳಂತೆ ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಯು.ಜಿ.ಸಿ. ವೇತನ ಶ್ರೇಣಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ ಪ್ರಾಂಶುಪಾಲರನ್ನು ಆಡಳಿತಾತ್ಮಕ ಹುದ್ದೆಗೆ ನಿಯೋಜಿಸಲು ಅವಕಾಶವಿರುವುದಿಲ್ಲ. ಇವರು ಯು.ಜಿ.ಸಿ.ನಿಯಮಗಳಡಿ ವೇತನ ಶ್ರೇಣಿಯನ್ನು ಪಡೆಯುತ್ತಿದ್ದು, ಬೋಧಕೇತರ ಹುದ್ದೆಯು ರಾಜ್ಯವೇತನ ಶ್ರೇಣಿಯದ್ದಾಗಿರುತ್ತದೆ. ಆದ್ದರಿಂದ, ಕಾಲೇಜು ಶಿಕ್ಷಣ ಇಲಾಖೆಯ ಬೋಧಕರುಗಳನ್ನು ಬೋಧಕೇತರ ಇಲಾಖೆಗಳಿಗೆ ಅನ್ಯಕಾರ್ಯನಿಮಿತ್ತ ಕಳುಹಿಸಿರುವುದಿಲ್ಲ.

<u>ತಾಂತ್ರಿಕ ಶಿಕ್ಷಣ:-</u> ತಾಂತ್ರಿಕ ಶಿಕ್ಷಣ ಇಲಾಖೆಯಡಿಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್, ಮತ್ತು ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳ ಪೈಕಿ 06 ಬೋಧಕ ಸಿಬ್ಬಂದಿಗಳನ್ನು ವಿವಿಧ ಇಲಾಖೆಗಳಿಗೆ ನಿಯೋಜಿಸಲಾಗಿರುತ್ತದೆ. ಸದರಿ ನಿಯೋಜನೆಗಳಿಂದ ಬೋಧನೆ ಮತ್ತು ಆಡಳಿತಕ್ಕೆ ಸಂಬಂಧಿಸಿದಂತೆ ಯಾವುದೇ ಸಮಸ್ಯೆ ಉಂಟಾಗಿರುವುದಿಲ್ಲ.

**ಇಡಿ 240 ಡಿಸಿಇ 2021**

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು